ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ-28-ಕಟ್ಟಡ-2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.01.2018

## ಸಭಾ ಸೂಚನಾ ಪತ್ರ

ವಿಷಯ: ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ಹಾಗೂ ಹಾಸ್ಟೆಲ್ ಕಟ್ಟಡ ಕಾಮಗಾರಿಗಳ ಪ್ರಗತಿ ಪರಿಶೀಲನೆ ಬಗ್ಗೆ.

* * *

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ **ಸಾಮಾನ್ಯ, ವಿಶೇಷ ಅಭಿವೃದ್ಧಿ ಯೋಜನೆ ಎಸ್.ಸಿ.ಪಿ/ಟಿ.ಎಸ್.ಪಿ, ರೂಸಾ ಯೋಜನೆಯಡಿಯಲ್ಲಿ** ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ **ಹೊಸ ಕಟ್ಟಡ, ಹೆಚ್ಚುವರಿ ತರಗತಿ ಕೊಠಡಿ, ಪ್ರಯೋಗಾಲಯ, ಶೌಚಾಲಯ ಹಾಗೂ ಹಾಸ್ಟೆಲ್ ಕಟ್ಟಡ ಮತ್ತಿತರೆ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನು** ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ **ದಿನಾಂಕ:18.01.2018ರಂದು ಪೂರ್ವಾಹ್ನ ಬೆಳಗ್ಗೆ** 10-30ಗಂಟೆಗೆ ಇಲಾಖೆಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದು, ಕಾಮಗಾರಿಗಳ ಪ್ರಗತಿ ಬಗ್ಗೆ ನಿಗಧಿತ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿಮಾಡಿ ದಿನಾಂಕವನ್ನೊಳಗೊಂಡ ಛಾಯಾ ಚಿತ್ರಗಳೊಂದಿಗೆ ಪ್ರಗತಿ ವರದಿಯನ್ನು ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರಗಳನ್ನು ದೃಢೀಕರಣದೊಂದಿಗೆ ಕಡ್ಡಾಯವಾಗಿ ದಿನಾಂಕ: 12.01.2018ರ ಒಳಗೆ Hard & Soft Copy ಯನ್ನು Excel Formate ನಲ್ಲಿ ಇಮೇಲ್ ವಿಳಾಸ dce.building2014@gmail.comಗೆ ಸಲ್ಲಿಸಲು ಸೂಚಿಸಿದ್ದರೂ ಮಾಹಿತಿ ಸಲ್ಲಿಸಿರುವುದಿಲ್ಲ. ಆದುದರಿಂದ ದಿನಾಂಕ:18-01-2018ರಂದು ನಿಗಧಿಯಾಗಿದ್ದ ಸಭೆಯನ್ನು ಮುಂದೂಡಲಾಗಿದೆ.

ದಿನಾಂಕ:21-12-2017ರಂದು ಜರುಗಿದ ಪ್ರಗತಿ ಪರಿಶೀಲನಾ ಸಭೆಯ ನಡವಳ ಪ್ರತಿಯನ್ನು ಈಗಾಗಲೇ ಕಳುಹಿಸಲಾಗಿದ್ದು, ನಡವಳಿಗೆ ಅನುಪಾಲನಾ ವರದಿ ಹಾಗೂ ಅಪೇಕ್ಷಿತ ಪ್ರಗತಿ ವರದಿಯನ್ನು ಈ ಕೆಳಕಾಣಿಸಿದ ನಮೂನೆಯಲ್ಲಿ ಭರ್ತಿ ಮಾಡಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾದ ಅನುದಾನ ಬಳಕೆ ಪ್ರಮಾಣ ಪತ್ರಗಳೊಂದಿಗೆ ತಪ್ಪದೇ ದಿನಾಂಕ: 20-01-2018 ರೊಳಗಾಗಿ ಇಲಾಖೆಯ ತಾಂತ್ರಿಕ ಕೋಶಕ್ಕೆ ಸಲ್ಲಿಸಲು ತಿಳಿಸಲಾಗಿದೆ.

**ನಿರ್ಮಾಣ ಸಂಸ್ಥೆ** : ..........

| ಕ್ರ. ಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ | ಮಂಜೂರಾದ ವರ್ಷ | 2016-17ನೇ ಸಾಲಿನ ವರೆಗೆ ಬಿಡುಗಡೆ ಮಾಡಲಾದ ಅನುದಾನ | 2017-18ನೇ ಸಾಲಿನ ವರೆಗೆ ಬಿಡುಗಡೆ ಮಾಡಲಾದ ಅನುದಾನ | ಒಟ್ಟು ಅನುದಾನ (5+6) | ಒಟ್ಟು ಖರ್ಚು | ಬಾಕಿ (7-8) | ಭೌತಿಕ ಪ್ರಗತಿ ವಿವರ | ಷರಾ |
|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 |
| | | | | | | | | | | |
| | | | | | | | | | | |

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ-ಸಂಬಂಧಪಟ್ಟ ನಿರ್ಮಾಣ ಸಂಸ್ಥೆಯಿಂದ ತಮ್ಮ ವ್ಯಾಪ್ತಿಯಲ್ಲಿನ ಕಾಲೇಜುಗಳ ಮಾಹಿತಿಯನ್ನು ಪಡೆದು ಸಭೆಗೆ ಹಾಜರಾಗುವಂತೆ ತಿಳಿಸಲಾಗಿದೆ.
2. ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, 3 ಮತ್ತು 4ನೇ ಮಹಡಿ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009
3. ಮುಖ್ಯ ಇಂಜಿನೀಯರ್‌ರವರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ), ಕೆ.ಆರ್. ವೃತ್ತ, ಬೆಂಗಳೂರು.

4. ಮುಖ್ಯ ಇಂಜಿನೀಯರ್‌ರವರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಸಂಪರ್ಕ ಮತ್ತು ಕಟ್ಟಡಗಳು(ಉತ್ತರ), ಸರ್.ಎಂ.ವಿ.ಮಾರ್ಗ, ಧಾರವಾಡ.
5. ಮುಖ್ಯ ಇಂಜಿನೀಯರ್‌ರವರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಸಂಪರ್ಕ ಮತ್ತು ಕಟ್ಟಡಗಳು(ಈಶಾನ್ಯ), ಪಬ್ಲಿಕ್ ಗಾರ್ಡನ್, ವೀರಶೈವ ಕಲ್ಯಾಣ ಮಂಟಪ ಹಿಂಭಾಗ, ಕಲಬುರಗಿ-585 001
6. ವ್ಯವಸ್ಥಾಪಕರು, ರೈಟ್ಸ್(RITES) ಲಿಮಿಟೆಡ್, 6ಎ, ಭಾರತ್ ಅಪಾರ್ಟ್‌ಮೆಂಟ್ಸ್, 44/1, ಫೇರ್ ಫೀಲ್ಡ್ ಬಡಾವಣೆ, ರೇಸ್‌ಕೋರ್ಸ್‌ರಸ್ತೆ, ಬೆಂಗಳೂರು-560 001.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ಗ್ರಾಮೀಣಾಭಿವೃದ್ಧಿ ಭವನ, 4 ಮತ್ತು 5ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-560 009.
8. ಚೇರ್‌ಮೆನ್/ಜಿಲ್ಲಾಧಿಕಾರಿಗಳು, ಸಂಬಂಧಪಟ್ಟ ಜಿಲ್ಲಾ ನಿರ್ಮಿತಿ ಕೇಂದ್ರಗಳಿಗೆ

ಪ್ರತಿಯನ್ನು:

1. ಆಯುಕ್ತರ ಆಪ್ತ ಶಾಖೆ ಕೇಂದ್ರ ಕಛೇರಿ, ಬೆಂಗಳೂರು, ಇವರ ಅಗತ್ಯ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತ ಶಾಖೆ ಕೇಂದ್ರ ಕಛೇರಿ, ಬೆಂಗಳೂರು, ಇವರಅಗತ್ಯ ಕ್ರಮಕ್ಕಾಗಿ.
3. ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆ ಕೇಂದ್ರ ಕಛೇರಿ, ಬೆಂಗಳೂರು, ಇವರ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು, ಇವರ ಅಗತ್ಯ ಕ್ರಮಕ್ಕಾಗಿ.